ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1458
ಸದಸ್ಯರ ಹೆಸರು	:	ಶ್ರೀ ಪ್ರಕಾಶ್ ಕೆ.ರಾಥೋಡ್ (ನಾಮ ನಿರ್ದೇಶನ ಹೊಂದಿದವರು)
ಉತ್ತರಿಸುವ ದಿನಾಂಕ	:	17.03.2021.
ಉತ್ತರಿಸುವ ಸಚಿವರು	:	ಉಪ ಮುಖ್ಯಮಂತ್ರಿಗಳು ಲೋಕೋಪಯೋಗಿ ಇಲಾಖೆ

ಕ್ರ ಸಂ	ಪ್ರಶ್ನೆ	ಉತ್ತರ
ಅ)	ಜೇವರ್ಗಿ ಸಂಕೇಶ್ವರ ರಸ್ತೆಯನ್ನು ರಾಜ್ಯ ಹೆದ್ದಾರಿಯಿಂದ ರಾಷ್ಟ್ರೀಯ ಹೆದ್ದಾರಿಯಾಗಿ ಪರಿವರ್ತಿಸಲಾಗಿದೆಯೇ;	ಜೇವರ್ಗಿ-ವಿಜಯಪುರ ವರೆಗಿನ ರಾಜ್ಯ ಹೆದ್ದಾರಿಯನ್ನು ರಾಷ್ಟ್ರೀಯ ಹೆದ್ದಾರಿ-218 (ಹೊಸ ರಾ.ಹೆ-50) ಆಗಿ ಮೇಲ್ದರ್ಜೆಗೇರಿಸಲಾಗಿದೆ. ವಿಜಯಪುರ - ಸಂಕೇಶ್ವರ ವರೆಗಿನ ರಾಜ್ಯ ಹೆದ್ದಾರಿಯನ್ನು ರಾಷ್ಟ್ರೀಯ ಹೆದ್ದಾರಿ 548B ಎಂದು ಮೇಲ್ದರ್ಜೆಗೇರಿಸಲಾಗಿದೆ.
ಆ)	ರಾಷ್ಟ್ರೀಯ ಹೆದ್ದಾರಿಯನ್ನಾಗಿ ಪರಿವರ್ತಿಸಿದ ನಂತರ ಎಷ್ಟು ಪಥ ರಸ್ತೆಗಳನ್ನಾಗಿ ಮಾಡಲು ಯೋಚಿಸಲಾಗಿದೆ; ತಗಲುವ ವೆಚ್ಚ ಎಷ್ಟು;	ಮೇಲ್ದರ್ಜೆಗೇರಿಸಲಾದ ಜೇವರ್ಗಿ- ವಿಜಯಪುರ ಭಾಗದ ರಾಷ್ಟ್ರೀಯ ಹೆದ್ದಾರಿ-218 (ಹೊಸ ರಾ.ಹೆ.50) ರಸ್ತೆಯು ಗಟ್ಟಿ ಬಾಹುಗಳುಳ್ಳ ದ್ವಿಪಥ ರಸ್ತೆಯನ್ನು ಅಭಿವೃದ್ಧಿಪಡಿಸಲಾಗುತ್ತಿದೆ. ಹಾಗೂ ಕಾಮಗಾರಿಯ ವೆಚ್ಚ ರೂ.523.00 ಕೋಟಿಗಳಾಗಿರುತ್ತದೆ ಎಂದು ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಎಂದು ವರದಿಸಿರುತ್ತಾರೆ. ವಿಜಯಪುರ-ಸಂಕೇಶ್ವರವರೆಗಿನ ರಾಷ್ಟ್ರೀಯ ಹೆದ್ದಾರಿ-548B ಒಟ್ಟು 169 ಕಿಮೀ ಇದ್ದು, ಲೋಕೋಪಯೋಗಿ ಇಲಾಖೆ ರಾಷ್ಟ್ರೀಯ ಹೆದ್ದಾರಿ ವಲಯಕ್ಕೆ ಸಂಬಂಧಿಸಿರುತ್ತದೆ. ಅದರಲ್ಲಿ ಈಗಾಗಲೇ ಕಿಮೀ.0.00 (ವಿಜಯಪುರ) ರಿಂದ 80.00 (ಅಥಣಿ) ರವರೆಗಿನ ಯೋಜನಾ ವರದಿಯನ್ನು (DPR) ಭೂ-ಸಾರಿಗೆ ಮಂತ್ರಾಲಯ ನವದೆಹಲಿ ಇವರಿಗೆ ದ್ವಿಪಥದ ರಸ್ತೆಯನ್ನಾಗಿ ಅಭಿವೃದ್ಧಿಪಡಿಸಲು ರೂ.395.00 ಕೋಟಿ (ಸಿವಿಲ್ ಕಾಮಗಾರಿಯ ವೆಚ್ಚ) ಪ್ರಸ್ತಾವನೆಯನ್ನು ಸಲ್ಲಿಸಲಾಗಿದ್ದು, ಅನುಮೋದನೆ ನಿರೀಕ್ಷಿಸಲಾಗಿದೆ.
ಇ)	ರಸ್ತೆ ಅಗಲೀಕರಣಕ್ಕೆ ಬೇಕಾಗಿರುವ ಭೂಸ್ವಾಧೀನ ಪ್ರಕ್ರಿಯೆ ಯಾವ ಹಂತದಲ್ಲಿದೆ;	ವಿಜಯಪುರ-ಗುಲ್ಬರ್ಗಾ-ಹುಮ್ನಾಬಾದ್ ಭಾಗದ ರಾಷ್ಟ್ರೀಯ ಹೆದ್ದಾರಿ-218 (ಹೊಸ ರಾ.ಹೆ.50) ರಸ್ತೆ ಅಗಲೀಕರಣಕ್ಕೆ ಬೇಕಾಗಿರುವ ಭೂ-ಸ್ವಾಧೀನ ಪ್ರಕ್ರಿಯೆ ಪೂರ್ಣಗೊಂಡಿರುತ್ತದೆ ಎಂದು ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ದವರು ತಿಳಿಸಿರುತ್ತಾರೆ. ರಾಷ್ಟ್ರೀಯ ಹೆದ್ದಾರಿ ವಲಯ ಲೋಕೋಪಯೋಗಿ ಇಲಾಖೆಗೆ ಸಂಬಂಧಿಸಿದ ರಸ್ತೆ ಅಗಲೀಕರಣಕ್ಕೆ ಬೇಕಾಗಿರುವ ಭೂಸ್ವಾಧೀನ ಪ್ರಕ್ರಿಯೆ 3(A) ಪ್ರಾರಂಭಿಸಬೇಕಾಗಿದ್ದು ಈ ಪ್ರಸ್ತಾವನೆಗೆ ಮಂಜೂರಾತಿ ದೊರೆತ ನಂತರ ಕ್ರಮ ಕೈಗೊಳ್ಳಲಾಗುವದು.
ಈ)	ಭೂಸ್ವಾಧೀನಕ್ಕೆ ಬೇಕಾಗುವ ಹಣವನ್ನು ರಾಜ್ಯ ಸರ್ಕಾರ ಬಿಡುಗಡೆ ಮಾಡಿದೆಯೇ?	ವಿಜಯಪುರ - ಗುಲ್ಬರ್ಗಾ - ಹುಮ್ನಾಬಾದ್ ಭಾಗದ ರಾಷ್ಟ್ರೀಯ ಹೆದ್ದಾರಿ-218 (ಹೊಸ ರಾ.ಹೆ.50) ಕಾಮಗಾರಿಗೆ ಸಂಬಂಧಪಟ್ಟಂತೆ ರಾಜ್ಯ ಸರ್ಕಾರವು ಭೂಸ್ವಾಧೀನ ಪ್ರಕ್ರಿಯೆಯೆಗೆ ಯಾವುದೇ ಹಣ ಬಿಡುಗಡೆ ಮಾಡಿರುವುದಿಲ್ಲ. ರಾಷ್ಟ್ರೀಯ ಹೆದ್ದಾರಿ ವಲಯಕ್ಕೆ ಸಂಬಂಧಿಸಿದಂತೆ ರಸ್ತೆಯ ಭೂ-ಸ್ವಾಧೀನಕ್ಕೆ ಬೇಕಾಗುವ ಹಣವನ್ನು ಯೋಜನಾ ವರದಿಯಲ್ಲಿ ಪ್ರಸ್ತಾಪಿಸಲಾಗಿದೆ.

ಕಡತ ಸಂಖ್ಯೆ: ಲೋಇ 93 ಸಿಎನ್‌ಹೆಚ್ 2021 (ಇ)

(ಗೋವಿಂದ.ಎಂ.ಕಾರಜೋಳ)
ಉಪ ಮುಖ್ಯಮಂತ್ರಿ,
ಲೋಕೋಪಯೋಗಿ ಇಲಾಖೆ